ಕ್ರ.ಸಂ.	ಕಾಲೇಜಿನ ಹೆಸರು
01.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೆ.ಆರ್.ಪುರಂ, ಬೆಂಗಳೂರು
02.	ಸರ್ಕಾರಿ ಮಹಿಳಾ ಕಾಲೇಜು, ಮಂಡ್ಯ
03.	ಶ್ರೀಮತಿ ವಿ.ಹೆಚ್.ಡಿ. ಕೇಂದ್ರಿಯ ಗೃಹ ವಿಜ್ಞಾನ ಕಾಲೇಜು, ಬೆಂಗಳೂರು
04.	ಸರ್ಕಾರಿ ಕಲಾ ಕಾಲೇಜು, ಹಾಸನ
05.	ಸರ್ಕಾರಿ ವಿಜ್ಞಾನ ಕಾಲೇಜು, ಹಾಸನ
06.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕುಣಿಗಲ್
07.	ಶ್ರೀಮತಿ ವಿ.ಹೆಚ್.ಡಿ. ಕೇಂದ್ರಿಯ ಗೃಹ ವಿಜ್ಞಾನ ಕಾಲೇಜಿನ ವಿದ್ಯಾರ್ಥಿನಿಲಯ, ಬೆಂಗಳೂರು
08.	ಮಹಾರಾಣಿ ಮಹಿಳಾ ಕಲಾ ಕಾಲೇಜು, ಬೆಂಗಳೂರು
09.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಾಸನ
10.	ಮಹಾರಾಣಿ ಮಹಿಳಾ ವಿಜ್ಞಾನ ಕಾಲೇಜು, ಬೆಂಗಳೂರು
11.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಾಸನ
12.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕೊಪ್ಪ
13.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮುಳಬಾಗಿಲು
14.	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಚನ್ನಗಿರಿ
15.	ಸರ್ಕಾರಿ ವಿಜ್ಞಾನ ಕಾಲೇಜು, ಚಿತ್ರದುರ್ಗ
16.	ಸರ್ಕಾರಿ ಕಾಲೇಜು, ಮಂಡ್ಯ.

ರಾಜ್ಯದಲ್ಲಿರುವ ಖಾಸಗಿ ಶಾಲೆಗಳ ಸಂಖ್ಯೆ

863 - ಶ್ರೀ ಯು.ಬಿ. ಬಣಕಾರ (ಹಿರೇಕೆರೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ನರ್ಸರಿ, ಪ್ರಾಥಮಿಕ, ಮಾಧ್ಯಮಿಕ ಖಾಸಗಿ ಶಾಲೆಗಳೆಷ್ಟು?

ಆ) ಈ ಶಾಲೆಗಳ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿ ಹಾಗೂ ಆಡಳಿತ ವೆಚ್ಚಕ್ಕಾಗಿ 92-93, 93-94, 94-95ರಲ್ಲಿ ಸರ್ಕಾರವು ವೆಚ್ಚ ಮಾಡಿದ ಅಥವಾ ಬಿಡುಗಡೆ ಮಾಡಿದ ವೆಚ್ಚವೆಷ್ಟು?

ಶ್ರೀ ಹೆಚ್.ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಶಾಲೆಗಳು		ಅನುದಾನಸಹಿತ	ಅನುದಾನ ರಹಿತ
ಅ) ಅ)	ಪೂರ್ವ ಪ್ರಾಥಮಿಕ ಶಾಲೆಗಳು (ನರ್ಸರಿ)	370	2005
ಆ)	ಕಿರಿಯ ಪ್ರಾಥಮಿಕ ಶಾಲೆಗಳು (1ರಿಂದ 4ರವರೆಗೆ)	429	1120
ಇ)	ಹಿರಿಯ ಪ್ರಾಥಮಿಕ ಶಾಲೆಗಳು (5 ರಿಂದ 7ಮಾಧ್ಯಮಿಕ)	1750	1766

ಆ)	92-93	93-94	94-95
	1743.46	2123.60	2374.29

ಬಸವಕಲ್ಯಾಣ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ

864 - ಶ್ರೀ ಬಸವರಾಜ ಪಾಟೀಲ್ ಅಟ್ಟೂರ್ (ಬಸವ ಕಲ್ಯಾಣ) : ಮಾನ್ಯ ಪ್ರಾಥಮಿಕ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ಪ್ರಾಥಮಿಕ, ಮಾಧ್ಯಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿರುವ ಶಿಕ್ಷಕರ ಕೊರತೆ ಎಷ್ಟು? ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಆ) ಬಸವ ಕಲ್ಯಾಣ ತಾಲ್ಲೂಕಿನಲ್ಲಿ ಹೊಸದಾಗಿ ಸರ್ಕಾರದ ವತಿಯಿಂದ ಪ್ರೌಢಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಉದ್ದೇಶವಿದೆಯೇ? ಹಾಗಿದ್ದಲ್ಲಿ ಸರ್ಕಾರದ ಮುಂದಿನ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದ ಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಬಸವಕಲ್ಯಾಣ ತಾಲ್ಲೂಕಿನಲ್ಲಿರುವ ಶಿಕ್ಷಕರ ಕೊರತೆ ಈ ಕೆಳಕಂಡಂತಿದೆ.

ಪ್ರಾಥಮಿಕ: ಮಾಧ್ಯಮಿಕ	ಪ್ರೌಢಶಾಲೆ	ಪದವಿ ಪೂರ್ವ ಕಾಲೇಜು
60	72	13

ಪ್ರಾಥಮಿಕ: ಮಾಧ್ಯಮಿಕ ಹಾಗೂ ಪ್ರೌಢ ಶಾಲೆಗಳಲ್ಲಿರುವ ಶಿಕ್ಷಕರ ಕೊರತೆಯನ್ನು ಒಂದು ಹಂತವಾಗಿ ತುಂಬಲು ಕ್ರಮ ಕೈಗೊಂಡಿವೆ.